ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕೇಂದ್ರ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ     ದಿನಾಂಕ : DATE : 27/3/21

# ಸಂವಿಧಾನದ 103ನೇ ತಿದ್ದುಪಡಿ: ಟಿಪ್ಪಣಿ ಬಹಿರಂಗಪಡಿಸಲು ಸರ್ಕಾರಕ್ಕೆ ನಿರ್ದೇಶನ

ನವದೆಹಲಿ (ಪಿಟಿಐ): ಆರ್ಥಿಕವಾಗಿ ದುರ್ಬಲವಾದ ಮೇಲ್ವರ್ಗದವರಿಗೆ ಶೇಕಡಾ 10ರಷ್ಟು ಮೀಸಲಾತಿ ಅವಕಾಶ ಕಲ್ಪಿಸುವ ಸಂವಿಧಾನದ 103ನೇ ತಿದ್ದುಪಡಿಗೆ ಸಂಬಂಧಿಸಿದ ಸಚಿವ ಸಂಪುಟದ ಟಿಪ್ಪಣಿ ಮತ್ತು ಪತ್ರ ವ್ಯವಹಾರ ಮತ್ತು ಅನುಬಂಧವನ್ನು ಬಹಿರಂಗಪಡಿಸುವಂತೆ ಕೇಂದ್ರ ಮಾಹಿತಿ ಆಯೋಗ ಸರ್ಕಾರಕ್ಕೆ ನಿರ್ದೇಶಿಸಿದೆ.

ಸಚಿವ ಸಂಪುಟದ ಟಿಪ್ಪಣಿ ಸೇರಿದಂತೆ ಸಚಿವರು, ಕಾರ್ಯದರ್ಶಿಗಳು ಮತ್ತು ಇತರ ಅಧಿಕಾರಿಗಳು ನೀಡುವ ದಾಖಲೆಗಳನ್ನು ಬಹಿರಂಗಪಡಿಸಲು ವಿನಾಯಿತಿ ನೀಡುವ ಮಾಹಿತಿ ಹಕ್ಕು ಸೆಕ್ಷನ್ 8(1) ಉಲ್ಲೇಖಿಸಿ ಮಂಡಿಸಿದ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದ ವಾದವನ್ನು ಮಾಹಿತಿ ಆಯೋಗ ತಳ್ಳಿಹಾಕಿತು. ಇದು ಪೂರ್ಣವಾಗಿ ಒಪ್ಪುವಂಥದ್ದಲ್ಲ ಎಂದು ಹೇಳಿತು.

ಸಂಪುಟದ ನಿರ್ಧಾರಗಳು, ನಿರ್ಧಾರ ತೆಗೆದುಕೊಂಡಿದ್ದರ ಹಿಂದಿನ ಕಾರಣಗಳು ಮತ್ತು ಯಾವ ಆಧಾರದ ಮೇಲೆ ನಿರ್ಧಾರಗಳನ್ನು ತೆಗೆದುಕೊಳ್ಳಲಾಗಿದೆ ಎಂಬುದನ್ನು ಸಾರ್ವಜನಿಕವಾಗಿ ಪ್ರಕಟಿಸಲು ಈ ಸೆಕ್ಷನ್ ಅನುಮತಿ ನೀಡುತ್ತದೆ ಎಂದು ಆಯೋಗ ಹೇಳಿದೆ.